ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಮಿತಿ (ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ)

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ ದಿನಾಂಕ : DATE : 20/03/2020

# ಅಂಗನವಾಡಿ ಮಕ್ಕಳಿಗೆ ಸಮವಸ್ತ್ರ ಪ್ರಸ್ತಾವಕ್ಕೆ ಸಮಿತಿ ಶಿಫಾರಸು

ಪ್ರಜಾವಾಣಿ ವಾರ್ತೆ

ಬೆಂಗಳೂರು: ಅಂಗನವಾಡಿ ಮಕ್ಕಳಿಗೆ ಸಮವಸ್ತ್ರ ಹಾಗೂ ಸ್ವೆಟರ್ ನೀಡಲು ಆರ್ಥಿಕ ಇಲಾಖೆಗೆ ಮತ್ತೊಮ್ಮೆ ಪ್ರಸ್ತಾವ ಸಲ್ಲಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಮಿತಿ ಶಿಫಾರಸು ಮಾಡಿದೆ.

ಸಮಿತಿಯ 36ನೇ ವರದಿಯನ್ನು ಅಧಿವೇಶನದಲ್ಲಿ ಸೋಮವಾರ ಮಂಡಿಸಲಾಯಿತು. 'ರಾಜ್ಯದ ಕೆಲವು ಜಿಲ್ಲೆಗಳಲ್ಲಿ ಚಳಿಯ ವಾತಾವರಣ ಇದೆ. ಈ ಹಿಂದೆ ಕಳುಹಿಸಿದ ಪ್ರಸ್ತಾವನ್ನು ಆರ್ಥಿಕ ಇಲಾಖೆ ತಿರಸ್ಕರಿಸಿದೆ. ಮತ್ತೊಮ್ಮೆ ಪ್ರಸ್ತಾವ ಸಲ್ಲಿಸಬೇಕು' ಎಂದು ಸಮಿತಿ ಸೂಚಿಸಿದೆ.

**ಇತರ ಶಿಫಾರಸುಗಳು :**

- ಹೊಸ ಬಾಲಭವನಗಳ ನಿರ್ಮಾಣ ಮಾಡುವುದಕ್ಕಿಂತ ಹಾಲಿ ಇರುವ ಬಾಲಭವನಗಳನ್ನು ಉತ್ತಮ ರೀತಿಯಲ್ಲಿ ಅಭಿವೃದ್ಧಿಪಡಿಸಬೇಕು.
- ವಸತಿ ರಹಿತರಾಗಿರುವ ಮಾಜಿ ದೇವದಾಸಿಯರಿಗೆ ಪ್ರಸ್ತುತ ನೀಡುತ್ತಿರುವ ಅನುದಾನದ ಮೊತ್ತವನ್ನು ₹2 ಲಕ್ಷದಿಂದ ₹5 ಲಕ್ಷಕ್ಕೆ ಹೆಚ್ಚಿಸಲು ಪ್ರಸ್ತಾವ ಸಲ್ಲಿಸಬೇಕು.
- ಶೇ 75ಕ್ಕಿಂತ ಹೆಚ್ಚು ಅಂಗವಿಕಲತೆ ಹೊಂದಿರುವ ಅಂಗವಿಕಲರಿಗೆ ನೀಡುತ್ತಿರುವ ತಿಂಗಳ ನಿರ್ವಹಣಾ ಭತ್ಯೆಯನ್ನು ₹1,400ರಿಂದ ₹3 ಸಾವಿರಕ್ಕೆ ಹೆಚ್ಚಿಸಬೇಕು.
- ಗ್ರಾಮೀಣಪ್ರದೇಶದಲ್ಲಿಸೇವೆಸಲ್ಲಿಸುತ್ತಿರುವ ವೈದ್ಯರಿಗೆ ಸೂಕ್ತ ವಸತಿಗೃಹಗಳ ಸೌಲಭ್ಯ ಒದಗಿಸಬೇಕು.